ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
ದೂರವಾಣಿ: 080-22343904/05
ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/225/ಮಾದಕ ದ್ರವ್ಯ/2013-14
ದಿನಾಂಕ:19.12.2016.

# ಸುತ್ತೋಲೆ

ವಿಷಯ: NDPS (Narcotic Drugs and Psychotropic substances) Act, 1985ರ ಸಂಬಂಧ ಮಾರ್ಗಸೂಚಿ / ಕ್ರಮಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 128 ಅಅವಿ 2016 ದಿನಾಂಕ:01.12.2016.
2. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ (ಪೋಲಿಸ್ ಸೇವೆಗಳು - ಬಿ) ರವರ ಪತ್ರ ಸಂಖ್ಯೆ:ಒಇ 43 ಐಎನ್‌ಡಿ 2016 ದಿನಾಂಕ:01.10.2016.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗೃಹ ಇಲಾಖೆ, ರವರ ಅಧ್ಯಕ್ಷತೆಯಲ್ಲಿ ದಿನಾಂಕ:24.09.2016ರಂದು ನಡೆದ ಸಭೆಯ ನಡವಳಿಗಳು.

* * * * * *

NDPS (Narcotic Drugs and Psychotropic substances) Act, ರನ್ವಯ ಮಾದಕ ದ್ರವ್ಯಗಳ / ಪದಾರ್ಥಗಳ ಸೇವನೆಯನ್ನು ನಿಷೇಧಿಸಿದ್ದು, ಈ ಸಂಬಂಧ ಕೆಳಕಂಡ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ / ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.

1. ವಿದ್ಯಾರ್ಥಿಗಳ ಪೋಷಕ / ಪಾಲಕರುಗಳಿಗೆ ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತ ಮನವರಿಕೆ ಮಾಡುವುದು.
2. ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವ ಸಂಬಂಧ ತರಗತಿಗಳಲ್ಲಿ ವಿದ್ಯಾರ್ಥಿಗಳಿಂದ ಸಂಕಿರಣ / ಸಭೆಗಳನ್ನು ನಡೆಸುವುದು.
3. ಕಾಲೇಜುಗಳ ಆಡಳಿತ ಮಂಡಳಿ / ಅಧ್ಯಾಪಕ ವೃಂದಗಳೊಂದಿಗೆ ವಿದ್ಯಾರ್ಥಿಗಳಲ್ಲಿ ಮಾದಕ ದ್ರವ್ಯಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಬಗ್ಗೆ ಚರ್ಚಿಸುವುದು.
4. ಎನ್‌ಸಿಸಿ / ಎನ್‌ಎಸ್‌ಎಸ್ ವಿದ್ಯಾರ್ಥಿಗಳಿಂದ ಮಾದಕ ದ್ರವ್ಯಗಳ ಬಗ್ಗೆ ಕಾಲೇಜಿನ ಒಳಗೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅರಿವು ಮೂಡಿಸುವ ಸಂಬಂಧ ಅಗತ್ಯ ಕ್ರಮಕೈಗೊಳ್ಳುವುದು.
5. ಕಾಲೇಜುಗಳಲ್ಲಿ ಮಾದಕ ದ್ರವ್ಯಗಳಿಂದಾಗುವ ದುಷ್ಪರಿಣಾಮಗಳ ಬಗ್ಗೆ ಫಲಕಗಳನ್ನು ಪ್ರದರ್ಶಿಸುವುದು.
6. ಉಲ್ಲೇಖ (3)ರ ಗೃಹ ಇಲಾಖೆಯ ಸಭೆಯ ನಡವಳಿಗಳಲ್ಲಿ ಸೂಚಿಸಿರುವಂತೆ, ದಿನಾಂಕ:31.08.2016 ರವರೆಗೆ ವೀಸಾ ಅವಧಿ ಮುಗಿದ ನಂತರವೂ ಅಕ್ರಮವಾಗಿ ನೆಲೆಸಿರುವವರ ಒಟ್ಟು ಸಂಖ್ಯೆ:1011 ಇದರಲ್ಲಿ 737 ಆಫ್ರಿಕನ್ ದೇಶಗಳ ಪ್ರಜೆಗಳಿರುತ್ತಾರೆ. ಆದ್ದರಿಂದ ತಮ್ಮ ಕಾಲೇಜಿನಲ್ಲಿ ಇಂತಹ ವಿದೇಶಿ ವಿದ್ಯಾರ್ಥಿಗಳಿದ್ದರೆ, ಅಂತಹವರ ಮಾಹಿತಿಯನ್ನು ಸ್ಥಳೀಯ ಪೋಲೀಸ್ ಠಾಣೆಗೆ ತಪ್ಪದೆ ನೀಡುವುದು.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ – ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ರವಾನಿಸಲು ಸೂಚಿಸಲಾಗಿದೆ.

2. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ) – ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

<u>ಪ್ರತಿಯನ್ನು:</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು–560 001.
2. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ (ಪೋಲಿಸ್ ಸೇವೆಗಳು – ಬಿ) ವಿಧಾನಸೌಧ, ಬೆಂಗಳೂರು.
3. ಕಛೇರಿ ಪ್ರತಿ.